ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ಕಾರ್ಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/55/2015-16. ದಿನಾಂಕ:10-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಚಂದ್ರಮ್ಮ ಗಂಡ ಲೇಟ್ ಬಾರಿಕರ ರಾಮಪ್ಪ<br>ಹುಲಿಕೇರಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಹಿರೇಕುಂಬಳಕುಂಟೆ ಗ್ರಾಮದ ಸನಂ 46. ವಿಸ್ತೀರ್ಣ 8-85 ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹಿರೇಕುಂಬಳಕುಂಟೆ ಗ್ರಾಮದ ಸನಂ 46. ವಿಸ್ತೀರ್ಣ 8-85 ಎಕ್ರೆ ಜಮೀನನ್ನು ಸದರಿ ತಾಲೂಕು ಹುಲಿಕೇರಿ ಗ್ರಾಮದ ಚಂದ್ರಮ್ಮ ಗಂಡ ಲೇಟ್ ಬಾರಿಕರ ರಾಮಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹಿರೇಕುಂಬಳಕುಂಟೆ ಇವರು ನಮೂನೆ-21 ನೋಟಿಸನ್ನು ದಿನಾಂಕ 20-03-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಮೂಲ ಪಟ್ಟದಾರರ ಹೆಸರು ವ್ಯತ್ಯಾಸವಿದ್ದು ಅರ್ಜಿದಾರರಿಂದ ಹೇಳಿಕೆ ಮತ್ತು ಮಹಜರ್ ಪಡೆದಿಲ್ಲದಿರುವುದರಿಂದ ಹಾಗೂ ಮತದಾರರ ಗುರುತಿನ ಚೀಟಿಯಲ್ಲಿ ಬಾರಿಕರ ರಾಮಪ್ಪ ಎಂದು ನಮೂದು ಇಲ್ಲದ ಕಾರಣ ಹಾಗೂ ಹಳೇ ಪಹಣಿ ಪತ್ರಿಕೆಗಳನು ಸಲ್ಲಿಸಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 30//2014-15. ದಿನಾಂಕ 22-04-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 15-09-2015 ರಿಂದ 10-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹಿರೇಕುಂಬಳಕುಂಟೆ ಗ್ರಾಮದ ಸನಂ 46. ವಿಸ್ತೀರ್ಣ 8-85 ಎಕ್ರೆ ಜಮೀನು ನನ್ನ ಗಂಡನಾದ ಬಾರಿಕರ ರಾಮಪ್ಪ ತಂದೆ ಮುದಕನಹಳ್ಳಿ ಹನುಮಂತಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 05-01-2000 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ವಂಶವೃಕ್ಷವನ್ನು ಸಲ್ಲಿಸಿದಂತೆ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹಿರೇಕುಂಬಳಕುಂಟೆ ಗ್ರಾಮದ ಸನಂ 46. ವಿಸ್ತೀರ್ಣ 8-85 ಎಕ್ರೆ ಜಮೀನಿನ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಚಂದ್ರಮ್ಮ ಗಂಡ ಲೇಟ್ ಬಾರಿಕರ ರಾಮಪ್ಪ ಹುಲಿಕೇರಿ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 10-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪ ತಹಶೀಲ್ದಾರರು
ನಾಡಕಚೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಚಂದ್ರಮ್ಮ ಗಂಡ ಲೇಟ್ ಬಾರಿಕರ ರಾಮಪ್ಪ ಹುಲಿಕೇರಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.